# ಬಿ.ಬಿ.ಎಂ.ಪಿ ಮಹದೇವಪುರವಲಯ, ವಾರ್ಡ್ ಸಂಖ್ಯೆ.53, ಬಸವನಪುರ
# ವಾರ್ಡ್ ಸಮಿತಿಯ ನಡವಳಿಗಳು

**********

**ಸಭೆಯಲ್ಲಿ (ಗೂಗಲ್ ಮೀಟ್) ಹಾಜರಿದ್ದ ಸದಸ್ಯರುಗಳು ಹಾಗೂ ಅಧಿಕಾರಿಗಳು** ದಿನಾಂಕ: 18-12-2021

ಶ್ರೀ. ನಾಗೇಶ್, ನೋಡಲ್ ಅಧಿಕಾರಿ ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು,

ಶ್ರೀ. ವಿನಯ್. ಕೆ, ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ.53, ಬಸವನಪುರ ಹಾಗೂ ವಾರ್ಡ್ ಸಮಿತಿ ಕಾರ್ಯದರ್ಶಿಗಳು,

ಶ್ರೀ. ರಾಘವೇಂದ್ರ. ಜೆ.ಎನ್, ಆರೋಗ್ಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ.53, ಬಸವನಪುರ,

ಶ್ರೀ. ಸುರೇಶ್. ಎಸ್, ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ.53, ಬಸವನಪುರ,

ಶ್ರೀ. ಓಬಲೇಶ್.ವಿ, ತೆರಿಗೆ ನಿರೀಕ್ಷಕರು, ವಾರ್ಡ್ ಸಂಖ್ಯೆ.53, ಬಸವನಪುರ, ಮತ್ತು ವಾರ್ಡ್‌ನ ಸಾರ್ವಜನಿಕರು.

ಮಾನ್ಯ ಮುಖ್ಯ ಆಯುಕ್ತರ ಕಛೇರಿ ಆದೇಶ ಸಂಖ್ಯೆ: ಬಿ12(ಕೋ-19)/04/2021-22 ರಂತೆ ವಾರ್ಡ್-53 ಬಸವನಪುರದ ವಾರ್ಡ್ ಮಟ್ಟದ ವಿಕೇಂದ್ರೀಕೃತ ಚಿಕಿತ್ಸೆಯ ಸರದಿ ನಿರ್ಧಾರ ಮತ್ತು ತುರ್ತು ಪ್ರತಿಕ್ರಿಯೆ ಸಮಿತಿ (ಫ.ಆ.ಅ) ಗೆ ನೇಮಿಸಿರುವ ಮಾನ್ಯ ನೋಡಲ್ ಅಧಿಕಾರಿಯವರ ಆದೇಶದಂತೆ, ದಿನಾಂಕ 09-11-2021 ರಂದು ಕೆ.ಆರ್.ಪುರ ವಿಧಾನಸಭಾ ಕ್ಷೇತ್ರದ, ಬಿ.ಬಿ.ಎಂ.ಪಿ ಮಹದೇವಪುರ ವಲಯದ ವಾರ್ಡ್ ಸಂಖ್ಯೆ.53, ಬಸವನಪುರ ವಾರ್ಡ್ ಸಮಿತಿಯ ಸಭೆಯನ್ನು ಮಾನ್ಯ ಅಧ್ಯಕ್ಷರು ವಾರ್ಡ್ ಸಮಿತಿ ಮತ್ತು ನೋಡಲ್ ಅಧಿಕಾರಿಗಳಾದ ಶ್ರೀ. ನಾಗೇಶ್, ಮತ್ತು ವಾರ್ಡ್ ಸಮಿತಿ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರಾದ ಶ್ರೀ. ವಿನಯ್.ಕೆ ರವರ ಸಮ್ಮುಖದಲ್ಲಿ ಸಭೆಯನ್ನು ನಡೆಸಲಾಯಿತು.

ವಾರ್ಡ್ ಸಮಿತಿಯ ಕಾರ್ಯದರ್ಶಿಗಳಾದ ಶ್ರೀ. ವಿನಯ್.ಕೆ ರವರು ಸಭೆಗೆ ಹಾಜರಾದ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳಾದ ಶ್ರೀ. ನಾಗೇಶ್, ರವರಿಗೆ ಹಾಗೂ ಸಭೆಗೆ ಹಾಜರಾಗಿದ್ದ ಎಲ್ಲಾ ಅಧಿಕಾರಿಗಳು ಮತ್ತು ಸಾರ್ವಜನಿಕರಿಗೆ ಸ್ವಾಗತವನ್ನು ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

ಸದರಿ ಸಭೆಯಲ್ಲಿ ಮೊಟ್ಟಮೊದಲಿಗೆ ಎಲ್ಲಾ ಸದಸ್ಯರ ಪರಸ್ಪರ ಪರಿಚಯ ಮಾಡಿಕೊಂಡು, ವಾರ್ಡ್ ವ್ಯಾಪ್ತಿಯಲ್ಲಿ ಘನ ತ್ಯಾಜ್ಯ ನಿರ್ವಹಣೆ, ರಸ್ತೆ ಗುಂಡಿ ಮುಚ್ಚುವ ಬಗ್ಗೆ, ಬೀದಿ ದೀಪಗಳ ನಿರ್ವಹಣೆ ಬಗ್ಗೆ ಮತ್ತು ಕೋವಿಡ್-19 ಸಾಂಕ್ರಾಮಿಕ ರೋಗದ ನಿಯಂತ್ರಣದ ಬಗ್ಗೆ ಸವಿವರವಾಗಿ ಚರ್ಚಿಸಲು ಸಾರ್ವಜನಿಕರಿಗೆ ತಿಳಿಸಲಾಯಿತು.

- ದೇವಸಂದ್ರ ಮುಖ್ಯ ಹಾಗೂ ಕೃಷ್ಣ ಚಿತ್ರಮಂದಿರದ ರಸ್ತೆಯಲ್ಲಿನ ಟ್ರಾಫಿಕ್ ಸಮಸ್ಯೆಯ ಬಗ್ಗೆ ಚರ್ಚಿಸಲಾಯಿತು.
- ಅನ್ನಪೂರ್ಣೇಶ್ವರಿ ಬಡಾವಣೆಯ ಮಳೆ ನೀರು ಕಾಲುವೆಯ ಕಾಮಗಾರಿಯು ಸ್ಥಗಿತಗೊಂಡಿರುವ ಬಗ್ಗೆ ಹಿಂದಿನ ಸಭೆಯಲ್ಲಿ ತಿಳಿಸಲಾಗಿದ್ದರು ಸಹ ಇನ್ನೂ ಕಾಮಗಾರಿ ಪ್ರಾರಂಭವಾಗದಿರುವ ಬಗ್ಗೆ ಚರ್ಚಿಸಲಾಯಿತು.
- ಸೀಗೆಹಳ್ಳಿ ಕೆರೆಯ ಕಾಮಗಾರಿಯು ಸ್ಥಗಿತಗೊಂಡಿರುವ ಬಗ್ಗೆ ಚರ್ಚಿಸಲಾಯಿತು ಮತ್ತು ಸಂಬಂಧಪಟ್ಟ ಅಧಿಕಾರಿಗಳಿಗೆ ದೂರವಾಣಿ ಕರೆ ಮಾಡಿ ತಿಳಿಸಲಾಯಿತು.
- ಪ್ರಿಯಾಂಕ ನಗರದಲ್ಲಿ ಬೀದಿ ದೀಪದ ಕಂಬವು ಬೀಳುವ ಸ್ಥಿತಿಯಲ್ಲಿರುವ ಬಗ್ಗೆ ಚರ್ಚಿಸಲಾಯಿತು.
- ಅನಧೀಕೃತವಾಗಿ ಬಿ.ಡ್ಬ್ಲ್ಯೂ.ಎಸ್.ಎಸ್.ಬಿ ವತಿಯಿಂದ ಅಗೆದಿರುವ ರಸ್ತೆಯನ್ನು ಸರಿಪಡಿಸುವ ಬಗ್ಗೆ ಹಿಂದಿನ ಸಭೆಯಲ್ಲಿ ತಿಳಿಸಿದರೂ ಯಾವುದೇ ಕ್ರಮವನ್ನು ಕೈಗೊಂಡಿಲ್ಲದ ಬಿ.ಡ್ಬ್ಲ್ಯೂ.ಎಸ್.ಎಸ್.ಬಿ ಅಭಿಯಂತರರಿಗೆ ಎಚ್ಚರಿಕೆಯನ್ನು ತಿಳಿಸಲಾಯಿತು.
- ಮುನೇಶ್ವರ ಬಡಾವಣೆ ನಿವಾಸಿಗಳು ಕಸದ ಸಮಸ್ಯೆಯ ಬಗ್ಗೆ ತಿಳಿಸಿದಾಗ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಕ್ರಮ ಕೈಗೊಳ್ಳುವಂತೆ ತಿಳಿಸಲಾಯಿತು.
- ಬ್ಲಾಕ್ ಸ್ಪಾಟ್‌ಗಳನ್ನು ತೆರವುಗೊಳಿಸಲು ಕ್ರಮ ಕೈಗೊಳ್ಳುವಂತೆ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ತಿಳಿಸಲಾಯಿತು.
- ಪ್ರಿಯಾಂಕ ನಗರದ ಒಳಚರಂಡಿ ಸಮಸ್ಯೆಯನ್ನು ಸರಿಪಡಿಸಲು ಬಿ.ಡ್ಬ್ಲ್ಯೂ.ಎಸ್.ಎಸ್.ಬಿ ಅಭಿಯಂತರರಿಗೆ ಕ್ರಮ ಕೈಗೊಳ್ಳುವಂತೆ ತಿಳಿಸಲಾಯಿತು.

- ವಾರ್ಡ್‌ನಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ವತಿಯಿಂದ ಯಾವುದೇ ರಸ್ತೆಯನ್ನು ಕತ್ತರಿಸುವ ಮೊದಲು ಪಾಲಿಕೆಯಿಂದ ಅನುಮತಿಯನ್ನು ಪಡೆಯುವಂತೆ ಪದೇಪದೇ ತಿಳಿಸಿದರೂ ಸಹ ಯಾವುದೇ ಕ್ರಮ ಕೈಗೊಳ್ಳದ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಭಿಯಂತರರರಿಗೆ ಮುಂದಿನ ದಿನಗಳಲ್ಲಿ ಶಿಸ್ತು ಕ್ರಮ ಕೈಗೊಳ್ಳುವ ಬಗ್ಗೆ ಎಚ್ಚರಿಸಲಾಯಿತು.
- ಕಸ ವಿಲೇವಾರಿಯ ಬಗ್ಗೆ ಚರ್ಚಿಸಲಾಗಿ, ವಾರ್ಡ್‌ನಲ್ಲಿ ಉತ್ಪತ್ತಿಯಾಗುವ ಘನತ್ಯಾಜ್ಯದ ಬಗ್ಗೆ ಚರ್ಚಿಸಲಾಗಿ ಕಸ ವಿಂಗಡಣೆ ಮತ್ತು ವಿಲೇವಾರಿ ಕಾರ್ಯವು ಸಮರ್ಪಕವಾಗಿ ನಡೆಸಬೇಕೆಂದು ಸಭೆಯಲ್ಲಿ ತೀರ್ಮಾನಿಸಲಾಯಿತು. ಅಂದಿನ ಕಸವನ್ನು ಅಂದೇ ವಿಲೇವಾರಿ ಮಾಡಬೇಕೆಂದು ಆರೋಗ್ಯ ಪರಿವೀಕ್ಷಕರಿಗೆ ತಿಳಿಸಲಾಯಿತು. ಆಗಿಂದಾಗ್ಗೆ ಸೊಳ್ಳೆ ನಿಯಂತ್ರಿಸಲು ಕ್ರಮ ಕೈಗೊಳ್ಳಲು ತೀರ್ಮಾನಿಸಲಾಯಿತು.

ಹೊಸ ಕಾಮಗಾರಿಗಳನ್ನು ಕೈಗೊಳ್ಳುವ ವರೆಗೆ ತಾತ್ಕಾಲಿಕವಾಗಿ ವಾರ್ಡ್ ಇಂಜಿನಿಯರ್‌ರವರಿಗೆ ರಸ್ತೆಗಳಲ್ಲಿನ ಗುಂಡಿಗಳ ಬಗ್ಗೆ ಗಮನ ಹರಿಸಿ ತುರ್ತಾಗಿ ಕ್ರಮವಹಿಸಿ ಸಾರ್ವಜನಿಕರಿಗೆ ತೊಂದರೆಯಾಗದಂತೆ ನಿಗಾವಹಿಸಲು ತಿಳಿಸಲಾಯಿತು.

ಸದಸ್ಯರು ಆಗಿಂದಾಗೆ ಕಾಮಗಾರಿಗಳನ್ನು ಪರಿವೀಕ್ಷಿಸಿ ಉತ್ತಮ ಸಲಹೆಗಳನ್ನು ಹಾಗೂ ಅತ್ಯವಶ್ಯಕವಾಗಿರುವ ಕಾಮಗಾರಿಗಳನ್ನು ಗುರುತಿಸಿ ಮುಂದಿನ ಸಭೆಯಲ್ಲಿ ತಿಳಿಸಲು ಕೋರಲಾಯಿತು.

ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಮಾನ್ಯ ಅಧ್ಯಕ್ಷರು ವಾರ್ಡ್ ಸಮಿತಿ
ಮತ್ತು ನೋಡಲ್ ಅಧಿಕಾರಿ

ವಾರ್ಡ್ ಸಮಿತಿ ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು